## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಡಾ// ರಾಜ್‌ಕುಮಾರ್ ವಾರ್ಡ್ ಸಂಖ್ಯೆ: 106**

---

ಸಂ : ಸ.ಅ(ವಾ–106)/ಪಿ.ಆರ್/ /2021–22 ದಿನಾಂಕ: 06/11/2021

### ವಾರ್ಡ್ ಸಮಿತಿ ಸಭೆಯ ನಡವಳಿ

ದಿನಾಂಕ: 06–11–2021 ರಂದು ವಾರ್ಡ್ ಸಂಖ್ಯೆ: 106 **ಡಾ// ರಾಜ್‌ಕುಮಾರ್ ವಾರ್ಡ್** ನಲ್ಲಿ ಶ್ರೀಮತಿ ಗೀತಾ ಎಲ್, ಕಾರ್ಯಪಾಲಕ ಅಭಿಯಂತರು, ಬಿಬಿಎಂಪಿ ಹಾಗೂ ವಾರ್ಡ್ ನಂ. 106 ರ ನೋಡಲ್ ಅಧಿಕಾರಿಗಳು ಇವರ ಅದ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿ

**ಹಾಜರಿದ್ದ ಅಧಿಕಾರಿ/ನೌಕರರು:–**

1) ಶ್ರೀಮತಿ. ಎನ್. ಅನ್ನಪೂರ್ಣ, ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ, ಅಗ್ರಹಾರ ದಾಸರಹಳ್ಳಿ.
2) ಶ್ರೀ ತೀರ್ಥಪ್ರಸಾದ್, ಎಇಇ, ಘನತ್ಯಾಜ್ಯ ವಿಭಾಗ
3) ಶ್ರೀ ರೇಣುಕಾ ಪ್ರಸಾದ್. ಎ.ಆರ್.ಒ
4) ಶ್ರೀ ರಾಜೇಂದ್ರ ಕಂದಾಯ ಪರಿವೀಕ್ಷಕರು.
5) ಶ್ರೀ. ಅರುಣ್‌ಕುಮಾರ್, ಸಹಾಯಕ ಅಭಿಯಂತರರು ಮತ್ತು ಕಾರ್ಯದರ್ಶಿ ವಾರ್ಡ್ ನಂ. 106
6) ಶ್ರೀ ನಾಗರಾಜ್. ಕೆ.ಬಿ, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್‌ಬಿ
7) ಶ್ರೀ ಆನಂದ್, ಹೆಚ್.ವಿ, ಸಹಾಯಕ ಅಭಿಯಂತರರು, ಬೆಸ್ಕಾಂ
8) ಶ್ರೀ ನಾಗಣ್ಣಗೌಡ, ಹಿರಿಯ ಆರೋಗ್ಯ ಪರಿವೀಕ್ಷಕರು
9) ಶ್ರೀ ಚಂದ್ರಶೇಖರ್, ಕಿರಿಯ ಆರೋಗ್ಯ ಪರಿವೀಕ್ಷಕರು
10) ಶ್ರೀ ಸೈಯದ್ ಜಮೀಲ್, ಕಿರಿಯ ಅಭಿಯಂತರರು, ಬೀದಿ ದೀಪಗಳು
11) ಶ್ರೀ ಮುರಳಿ, ತೆರಿಗೆ ವಸೂಲಾತಿಗಾರರು

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಅಧಿಕಾರಿಗಳು/ಹಾಜರಿದ್ದವರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

- ಸಭೆಯಲ್ಲಿ ಈ ಹಿಂದೆ ಕೈಗೊಂಡ ನಿರ್ಣಯಗಳ ಬಗ್ಗೆ ಚರ್ಚಿಸಲಾಯಿತು.
- ಮಾನ್ಯ ಅಧ್ಯಕ್ಷರು ಮಾತನಾಡಿ ರಸ್ತೆ ಗುಂಡಿಗಳನ್ನು ಮುಚ್ಚಿರುವ ವರದಿಯನ್ನು ಪಡೆದುಕೊಂಡರು ಹಾಗೂ ಬಿ.ಡಬ್ಲ್ಯೂ.ಎಸ್.ಎಸ್.ಬಿ ಮತ್ತು ಬೆಸ್ಕಾಂ ವತಿಯಿಂದ ಪ್ರಗತಿಯಲ್ಲಿರುವ ಕಾಮಗಾರಿಗಳು ಮತ್ತು ಕಾಮಗಾರಿಯಾದ ನಂತರ ರಸ್ತೆ ಗುಂಡಿಗಳನ್ನು ಮುಚ್ಚಿರುವ ವಿವರಗಳನ್ನು ಪಡೆದುಕೊಂಡರು.

- ರಸ್ತೆಯಲ್ಲಿರುವ ಡೆಬ್ರಿಸ್‌ಗಳನ್ನು ಕೂಡಲೇ ತೆರವುಗೊಳಿಸುವಂತೆ ವಾರ್ಡ್ ಅಭಿಯಂತರರಿಗೆ ಮಾನ್ಯ ಅಧ್ಯಕ್ಷರು ತಿಳಿಸಿದರು.

- ವಾರ್ಡ್ ವ್ಯಾಪ್ತಿಯಲ್ಲಿ ಹಳೆ ಕಟ್ಟಡಗಳಿಗೆ ನೀಡಿರುವ ನೋಟಿಸ್ ವಿವರಗಳನ್ನು ಮತ್ತು ಕಟ್ಟಡದ ಮಾಲೀಕರು ಕೈಗೊಂಡ ಕ್ರಮದ ಬಗ್ಗೆ ವಿವರವನ್ನು ವಾರ್ಡ್ ಅಭಿಯಂತರರಿಂದ ಮಾನ್ಯ ಅಧ್ಯಕ್ಷರು ಪಡೆದರು.

- ವಾರ್ಡ್ ವ್ಯಾಪ್ತಿಯಲ್ಲಿ ಸುಸ್ಥಿತಿಯಲ್ಲಿರುವ/ ಸುಸ್ಥಿತಿಯಲ್ಲಿರದೇ ಇರುವ ಕೊಳವೆ ಬಾವಿಗಳ ವಿವರಗಳನ್ನು ಮಾನ್ಯ ಅಧ್ಯಕ್ಷರು ಪಡೆದುಕೊಂಡರು.

- ಮಾನ್ಯ ಅಧ್ಯಕ್ಷರು ವಾರ್ಡ್ ವ್ಯಾಪ್ತಿಯ ಮಾಗಡಿ ರಸ್ತೆಯ ಪೋಲಿಸ್ ಕಾಲೋನಿಯಲ್ಲಿ ಪ್ರಗತಿಯಲ್ಲಿರುವ ಶಾಲಾ ಕಟ್ಟಡದ ಕಾಮಗಾರಿಯನ್ನು ಪರಿಶೀಲಿಸಿ ಗುಣಮಟ್ಟ ಕಾಯ್ದಿರಿಸುವಂತೆ ಮತ್ತು ಕಾಮಗಾರಿಯನ್ನು ಶೀಘ್ರವಾಗಿ ಪೂರ್ಣಗೊಳಿಸಲು ಕ್ರಮಕೈಗೊಳ್ಳುವಂತೆ ಗುತ್ತಿಗೆದಾರರಿಗೆ ತಿಳಿಸಿದರು.

- ವಾರ್ಡ್ ವ್ಯಾಪ್ತಿಯಲ್ಲಿ ಕರೋನಾ ಸೋಂಕಿತರು ಹಾಗೂ ಲಸಿಕೆ ನೀಡಿರುವ ವಿವರಗಳನ್ನು ಶ್ರೀಮತಿ ಎನ್. ಅನ್ನಪೂರ್ಣ, ವೈಧ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ, ಅಗ್ರಹಾರ ದಾಸರಹಳ್ಳಿ. ರವರಿಂದ ಪಡೆದುಕೊಂಡರು.

- **ಸ್ವಚ್ಚತೆ ಮತ್ತು ಘನತ್ಯಾಜ್ಯ ವಿಲೇವಾರಿ ಬಗ್ಗೆ**:- ವಾರ್ಡ್ ವ್ಯಾಪ್ತಿಯ ಬ್ಲ್ಯಾಕ್‌ಸ್ಪಾಟ್‌ಗಳನ್ನು ಕೂಡಲೇ ತೆರವುಗೊಳಿಸುವಂತೆ ಮತ್ತು ಅನಧೀಕೃತ ಜಾಗಗಳಲ್ಲಿ ಕಸವನ್ನು ಸುರಿಯುವವರ ಮೇಲೆ ನಿಗಾವಹಿಸಿ ದಂಡವಿಧಿಸುವಂತೆ ಮಾರ್ಷಲ್‌ಗಳಿಗೆ ಮಾನ್ಯ ಅಧ್ಯಕ್ಷರು ತಿಳಿಸಿದರು.

- ರಾಜಾಜಿನಗರ ಕೈಗಾರಿಕಾ ಎಸ್ಟೇಟ್‌ನಲ್ಲಿ ಅತಿ ಹೆಚ್ಚು ಕೈಗಾರಿಕಾ ಕಸ ಸಂಗ್ರಹವಾಗುತ್ತಿದ್ದು ಕೂಡಲೇ ತೆರವುಗೊಳಿಸುವಂತೆ ಮಾನ್ಯ ಅಧ್ಯಕ್ಷರು ಘನತ್ಯಾಜ್ಯ ಅಧಿಕಾರಿಗಳಿಗೆ ತಿಳಿಸಿದರು.

- ವಾರ್ಡ್ ವ್ಯಾಪ್ತಿಯಲ್ಲಿ ಸೋಲ್ಡರ್ ಡ್ರೈನ್‌ಗಳನ್ನು ಸ್ವಚ್ಚಗೊಳಿಸಿ ಮಳೆಗಾಲದಲ್ಲಿ ನೀರು ಸರಾಗವಾಗಿ ಹರಿಯಲು ಕ್ರಮವಹಿಸಬೇಕೆಂದು ಮಾನ್ಯ ಅಧ್ಯಕ್ಷರು ತಿಳಿಸಿದರು.

- ವಾರ್ಡ್ ವ್ಯಾಪ್ತಿಯಲ್ಲಿ ಅನಧಿಕೃತ ಫ್ಲೆಕ್ಸ್‌ಗಳನ್ನು/ ಬ್ಯಾನರ್‌ಗಳನ್ನು ತೆರವುಗೊಳಿಸಲು ಕ್ರಮವಹಿಸಬೇಕೆಂದು ಮಾನ್ಯ ಅಧ್ಯಕ್ಷರು ತಿಳಿಸಿದರು

- **ಬೆಸ್ಕಾಂ/ ಕೆ.ಪಿ.ಟಿ.ಸಿ.ಎಲ್** – ವಾರ್ಡ್ ವ್ಯಾಪ್ತಿಯಲ್ಲಿ ಕೆ.ಪಿ.ಟಿ.ಸಿ.ಎಲ್ ವತಿಯಿಂದ ಹೈಟೆನ್ಷನ್ ಲೈನ್ ಭೂಗತ ಅಳವಡಿಕೆ ಕಾಮಗಾರಿ ಪ್ರಗತಿಯಲ್ಲಿದ್ದು ಕಾಮಗಾರಿಯನ್ನು ಶೀಘ್ರವಾಗಿ ಪೂರ್ಣಗೊಳಿಸುವಂತೆ ಮತ್ತು ಕತ್ತರಿಸಿರುವ ರಸ್ತೆಗಳನ್ನು ಸುಸ್ಥಿತಿಯಲ್ಲಿಡುವಂತೆ ಅಧಿಕಾರಿಗಳಿ ಮಾನ್ಯ ಅಧ್ಯಕ್ಷರು ತಿಳಿಸಿದರು.

- **ಬಿ.ಡಬ್ಲ್ಯೂ.ಎಸ್.ಎಸ್.ಬಿ** : – ವಾರ್ಡ್ ವ್ಯಾಪ್ತಿಯ ರಾಜಾಜಿನಗರ 6ನೇ ಬ್ಲಾಕ್‌ನಲ್ಲಿ ಸಬ್‌ಲೇನ್/ಮೇನ್‌ಲೈನ್ ಅಳವಡಿಕೆಗಾಗಿ ರಸ್ತೆಯನ್ನು ಕತ್ತರಿಸಿದ್ದು, ಕಾಮಗಾರಿ ಪೂರ್ಣಗೊಂಡಿದ್ದರು ಸಹ ರಸ್ತೆಯನ್ನು ಸರಿಯಾದ ರೀತಿಯಲ್ಲಿ ಮುಚ್ಚಿರುವುದಿಲ್ಲ. ಕೂಡಲೇ ಸದರಿ ರಸ್ತೆಯನ್ನು ಪರಿಶೀಲಿಸಿ ಸರಿಯಾದ ರೀತಿಯಲ್ಲಿ ಗುಂಡಿಗಳನ್ನು ಮುಚ್ಚುವಂತೆ ಮಾನ್ಯ ಅಧ್ಯಕ್ಷರು ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ತಿಳಿಸಿದರು.

- **ಬೀದಿದೀಪಗಳು :** ವಾರ್ಡ್ ವ್ಯಾಪ್ತಿಯಲ್ಲಿ ಬೀದಿದೀಪಗಳನ್ನು ಸರಿಯಾಗಿ ನಿರ್ವಹಿಸುವಂತೆ ಮಾನ್ಯ ಅಧ್ಯಕ್ಷರು ಸಂಭಂದಿಸಿದ ಅಧಿಕಾರಿಗಳಿಗೆ ತಿಳಿಸಿದರು.

ಅಂತಿಮವಾಗಿ ನೋಡಲ್ ಅಧಿಕಾರಿಗಳು ಮಾತನಾಡಿ ಸಕಾಲದಲ್ಲಿ ಸಾರ್ವಜನಿಕರ ಕುಂದು ಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಳ್ಳಲು ಎಲ್ಲಾ ಇಲಾಖೆಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸುಲು ಸೂಚಿಸಿ ಮುಂದಿನ ಸಭೆಗೆ ಎಲ್ಲಾ ಅಧಿಕಾರಿ ಸಿಬ್ಬಂದಿಗಳು ಹಾಜರಿರಲು ತಿಳಿಸಿ ಸಭೆಯನ್ನು ಮುಕ್ತಾಯ ಮಾಡಿದರು.

06/11/24

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ.106 ಡಾ//ರಾಜ್‌ಕುಮಾರ್ ವಾರ್ಡ್
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

for 06/11/24

ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್ ನೋಡಲ್ ಅಧಿಕಾರಿಗಳು
ವಾರ್ಡ್ ನಂ.106 ಡಾ//ರಾಜ್‌ಕುಮಾರ್ ವಾರ್ಡ್
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಪ್ರತಿಯನ್ನು:-**

1) ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸದೆ.
2) ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸದೆ.
3) ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸದೆ.
4) ಜಂಟಿ ಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸದೆ.
5) ಮುಖ್ಯ ಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸದೆ.
6) ಅಧೀಕ್ಷಕ ಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸದೆ.
7) ಕಾರ್ಯಪಾಲಕ ಅಭಿಯಂತರರು (ಗೋವಿಂದರಾಜನಗರ) ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರ ಮಾಹಿತಿಗಾಗಿ ಕಳುಹಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂಎಸ್.ಎಸ್.ಬಿ ರವರ ಮಾಹಿತಿಗಾಗಿ ಕಳುಹಿಸಿದೆ